1022 (1095) ಶ್ರೀ ಮೋಹನ್‌ಕೃಷ್ಣ ಶೆಟ್ಟಿ (ಕುಮಟಾ): ಮಾನ್ಯ ಉನ್ನತ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ;

ಅ) ಕುಮಟಾ ತಾಲ್ಲೂಕಿನ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಸರ್ಕಾರಿ ಕಲಾ, ವಾಣಿಜ್ಯ, ವಿಜ್ಞಾನ ಪದವಿ ಶಿಕ್ಷಣ ಕಾಲೇಜನ್ನು ಸ್ಥಾಪಿಸುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಬಡವರು, ಮಧ್ಯಮ ವರ್ಗದವರು ಖಾಸಗಿ ಕಾಲೇಜಿನ ದುಬಾರಿ ಶಿಕ್ಷಣದ ಕಾರಣ ಪದವಿ ಶಿಕ್ಷಣದಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಕುಮಟಾದಲ್ಲಿ ಸರ್ಕಾರ ಕಲಾ, ವಾಣಿಜ್ಯ, ವಿಜ್ಞಾನ ಪದವಿ ಕಾಲೇಜು ಪ್ರಾರಂಭಿಸಲು ಏನು ಕ್ರಮ ಕೈಗೊಳ್ಳಲಾಗಿದೆ;

ಈ) ಯಾವಾಗ ಸರ್ಕಾರಿ ಪದವಿ ಕಾಲೇಜನ್ನು ಪ್ರಾರಂಭಿಸಲಾಗುವುದು?

ಶ್ರೀ ಡಿ.ಎಚ್. ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು)

ಅ) ಹೌದು

ಆ) ಇಲ್ಲಾ

ಇ) 2007–08ನೇ ಸಾಲಿನಿಂದ ಕುಮಟಾದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾರಂಭಿಸಲು ಪರಿಶೀಲಿಸಲಾಗುತ್ತಿದೆ.

ಈ) ಮೇಲಿನಂತೆ.

1023 (1230) ಶ್ರೀ ಮುನಿಯಪ್ಪ ಎಸ್.ಎಂ. (ಚಿಕ್ಕಬಳ್ಳಾಪುರ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ;

ಅ) ಚಿಕ್ಕಬಳ್ಳಾಪುರ ನಗರ ಪದವಿ ಪೂರ್ವ ಕಾಲೇಜು, ಪ್ರೌಢಶಾಲಾ ವಿಭಾಗದಲ್ಲಿ ಬಾಲಕ;ಬಾಲಕಿಯರಿಗೆ ಪ್ರತ್ಯೇಕ ವಿಭಾಗಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಪದವಿ ಪೂರ್ವ ಕಾಲೇಜು ವಿಭಾಗದಲ್ಲಿ ಪ್ರತ್ಯೇಕ ಬಾಲಕಿಯರ ವಿಭಾಗ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಚಿಕ್ಕಬಳ್ಳಾಪುರ ಗ್ರಾಮದಲ್ಲಿ ಸರ್ಕಾರಿ ಪ್ರೌಢಶಾಲೆಗಳು ಕಡಿಮೆ ಇದ್ದು, ವಿದ್ಯಾರ್ಥಿಗಳ ಸಂಖ್ಯೆ ಅಧಿಕವಾಗಿದ್ದು, ಹೆಚ್ಚುವರಿ ಸರ್ಕಾರಿ ಪ್ರೌಢಶಾಲೆಗಳನ್ನು ಮಂಜೂರು ಮಾಡುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೆ;

ಈ) ಹಾಗಿದ್ದಲ್ಲಿ ನಗರ, ಶ್ರೀರಾಮಪುರ, ಕಂದವಾರ ಗ್ರಾಮಗಳಲ್ಲಿ ಹೊಸದಾಗಿ ಪ್ರೌಢಶಾಲೆ ಮಂಜೂರು ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಉ) ನಂದಿ, ದಿಬ್ಬೂರು ಮತ್ತು ರೆಡ್ಡಿಗೊಲ್ಲವಾರಹಳ್ಳಿ ಗ್ರಾಮಗಳಲ್ಲಿ ಈಗಾಗಲೇ ಪ್ರೌಢಶಾಲೆ ನಡೆಯುತ್ತಿದ್ದು, ಪದವಿ ಪೂರ್ವ ಕಾಲೇಜಿನ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಊ) ಹಾಗಿದ್ದಲ್ಲಿ ನಂದಿ, ದಿಬ್ಬೂರು ಮತ್ತು ರೆಡ್ಡಿಗೊಲ್ಲವಾರಹಳ್ಳಿ ಗ್ರಾಮಗಳಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜು ಮಂಜೂರು ಮಾಡಲು ಸರ್ಕಾರ ಯಾವ ಕ್ರಮ ಕೈಗೊಳ್ಳುತ್ತಿದೆ;

ಋ) ಚಿಕ್ಕಬಳ್ಳಾಪುರ ತಾಲ್ಲೂಕಿನ ಪದವಿ ಪೂರ್ವ ಕಾಲೇಜು ಮತ್ತು ಪ್ರೌಢಶಾಲೆಗಳಲ್ಲಿ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಎ) ಹಾಗಿದ್ದಲ್ಲಿ ಮೇಲ್ಕಂಡ ಕಾಲೇಜು ಮತ್ತು ಪ್ರೌಢಶಾಲೆಗಳಲ್ಲಿ ಶಿಕ್ಷಕರ ಹುದ್ದೆಗಳು ಮಂಜೂರಾಗಿದ್ದು, ಖಾಲಿಯಿರುವ ಹುದ್ದೆಗಳನ್ನು ತುಂಬಲು ಸರ್ಕಾರ ಯಾವ ಕ್ರಮ ಕೈಗೊಳ್ಳುವುದು?

ಶ್ರೀ ಬಸವರಾಜ ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಹೌದು

ಆ) ಹೌದು

ಇ) 2006–07ನೇ ಸಾಲಿನಲ್ಲಿ ಚಿಕ್ಕಬಳ್ಳಾಪುರ ತಾಲ್ಲೂಕಿನ ಆವಲಗುರ್ಕಿಗೆ ಹೊಸ ಸರ್ಕಾರಿ ಪ್ರೌಢಶಾಲೆಯನ್ನು ಮಂಜೂರು ಮಾಡಲಾಗಿದೆ.

ಈ) 2007–08ನೇ ಸಾಲಿನ ಆಯವ್ಯಯದಲ್ಲಿನ ಹಣಕಾಸಿನ ಲಭ್ಯತೆ, ಶೈಕ್ಷಣಿಕ ಅಗತ್ಯತೆ ಇತ್ಯಾದಿಗಳನ್ನು ಪರಿಗಣಿಸಿ ಹಂತಹಂತವಾಗಿ ಸರ್ಕಾರಿ ಪ್ರೌಢಶಾಲೆಗಳನ್ನು ಮಂಜೂರು ಮಾಡಲಾಗುತ್ತಿದೆ. ಇದೊಂದು ನಿರಂತರ ಪ್ರಕ್ರಿಯೆಯಾಗಿದೆ.

ಊ) ಈ ಗ್ರಾಮಗಳಲ್ಲಿ ಪದವಿ ಪೂರ್ವ ಕಾಲೇಜುಗಳ ಅವಶ್ಯಕತೆ ಬಗ್ಗೆ ಯಾವುದೇ ಪ್ರಸ್ತಾವನೆ ಬಂದಿರುವುದಿಲ್ಲ.

ಋ) 2007–08ನೇ ಸಾಲಿನ ಆಯವ್ಯಯದಲ್ಲಿನ ಹಣಕಾಸಿನ ಲಭ್ಯತೆ, ಶೈಕ್ಷಣಿಕ ಅಗತ್ಯತೆ ಇತ್ಯಾದಿಗಳನ್ನು ಪರಿಗಣಿಸಿ ಹಂತಹಂತವಾಗಿ ಪದವಿ ಪೂರ್ವ ಕಾಲೇಜುಗಳನ್ನು ಮಂಜೂರು ಮಾಡಲಾಗುತ್ತಿದೆ. ಇದೊಂದು ನಿರಂತರ ಪ್ರಕ್ರಿಯೆಯಾಗಿದೆ.

ಋ) ಹೌದು.

ಎ) ಖಾಲಿಯಿರುವ ಪ್ರೌಢಶಾಲಾ ಸಹ ಶಿಕ್ಷಕ ಹಾಗೂ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಹುದ್ದೆಗಳನ್ನು ನೇರ ನೇಮಕಾತಿ ಹಾಗೂ ಬಡ್ತಿ ಮೂಲಕ ತುಂಬಿಕೊಳ್ಳುವ ಪ್ರಕ್ರಿಯೆ ಚಾಲನೆಯಲ್ಲಿದೆ.

1024 (757) ಶ್ರೀ ನರಸಿಂಹಸ್ವಾಮಿ ಜೆ. (ದೊಡ್ಡಬಳ್ಳಾಪುರ): ಮಾನ್ಯ ವಸತಿ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ;

ಅ) 2006–2007ರಲ್ಲಿ ರಾಜೀವ್ ಗಾಂಧಿ ಗ್ರಾಮೀಣ ವಸತಿ ಯೋಜನೆಯಡಿಯಲ್ಲಿ ವಸತಿ ಹೀನರ ಸೌಲಭ್ಯಕ್ಕೆ ನಿರ್ಮಿಸಿರುವ ಒಟ್ಟು ಮನೆಗಳ ಸಂಖ್ಯೆ ಎಷ್ಟು; ನಿವೇಶನ ರಹಿತರಿಗೆ ನಿವೇಶನ ಹಂಚಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು;

ಆ) ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ತಾಲ್ಲೂಕುವಾರು ಹಂಚಿಕೆಯಾಗಿರುವ ಮನೆಗಳು ಮತ್ತು ನಿವೇಶನಗಳ ಸಂಖ್ಯೆ ಎಷ್ಟು;

ಇ) ಸರ್ಕಾರಿ ಹಾಲಿ ನೀಡುತ್ತಿರುವ ರೂ.20000/– ರಲ್ಲಿ ಮನೆ ಕಟ್ಟಲು ಸಾಧ್ಯವೇ; ಇಲ್ಲವಾದಲ್ಲಿ ಸಹಾಯಧನವನ್ನು ಹೆಚ್ಚಿಸಲು ಅಗತ್ಯ ಕ್ರಮ ತೆಗೆದುಕೊಳ್ಳುವುದೇ?

ಶ್ರೀ ಡಿ.ಟಿ. ಜಯಕುಮಾರ್ (ವಸತಿ ಸಚಿವರು)

ಅ) ಗ್ರಾಮೀಣ ಆಶ್ರಯ 2006–2007 ಶ್ರೇಣಿಯಡಿಯಲ್ಲಿ ಒಟ್ಟು 340560 ಗುರಿಯನ್ನು ನೀಡಿದ್ದು, ಗುರಿಗೆ ಅನುಗುಣವಾಗಿ ಫಲಾನುಭವಿಗಳ ಆಯ್ಕೆ ಪ್ರಕ್ರಿಯೆ ಪ್ರಗತಿಯಲ್ಲಿದೆ.